ಅ) ಮಹಾನಗರ ಪಾಲಿಕೆಗಳ ಮೇಯರ್ ಮತ್ತು ಉಪ ಮೇಯರ್‌ಗಳ ಕಾರ್ಯಾವಧಿಯನ್ನು ಒಂದು ವರ್ಷ ಎಂದು ಈಗಾಗಲೇ ನಿಗಧಿಗೊಳಿಸಲಾಗಿದೆ. ಅಂತೆಯೇ ಪುರಸಭೆ, ನಗರಸಭೆ ಹಾಗೂ ಟೌನ್ ಪಂಚಾಯತ್‌ಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಅವಧಿಯನ್ನು 30 ತಿಂಗಳಿಗೆ ನಿಗಧಿಗೊಳಿಸಲಾಗಿದೆ. ಈ ಅವಧಿಯನ್ನು ಕಡಿಮೆ ಮಾಡುವ ಬಗ್ಗೆ ಸರ್ಕಾರದ ಮುಂದೆ ಯಾವ ಪ್ರಸ್ತಾವನೆಯು ಇರುವುದಿಲ್ಲ.

1995-96ರಲ್ಲಿ ಹೊಸ ಸಕ್ಕರೆ ಕಾರ್ಖಾನೆಗಳನ್ನು ಪ್ರಾರಂಭಿಸಲು ಕೇಂದ್ರದ ಅನುಮತಿ

126 - ಶ್ರೀ ಎಸ್. ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ವರ್ಷ ರಾಜ್ಯದಲ್ಲಿ ಎಷ್ಟು ಹೊಸ ಸಕ್ಕರೆ ಕಾರ್ಖಾನೆಗಳನ್ನು ತೆರೆಯಲು ಕೇಂದ್ರದ ಅನುಮತಿಯನ್ನು ಕೋರಲಾಗಿದೆ?

ಆ) ಎಷ್ಟು ಕಾರ್ಖಾನೆಗಳಿಗೆ ಅನುಮತಿ ದೊರಕಿದೆ. ಅನುಮತಿ ದೊರಕಿದ್ದರೆ ಯಾವ ಯಾವ ಕಾರ್ಖಾನೆಗಳಿಗೆ ಅನುಮತಿ ದೊರಕಿದೆ (ವಿವರಗಳನ್ನೊದಗಿಸುವುದು)

ಶ್ರೀ ಪಿ.ಸಿ. ಸಿದ್ದನಗೌಡರ್ (ಸಕ್ಕರೆ, ಜವಳಿ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ ಮತ್ತು ಜೀವಿ ಶಾಸ್ತ್ರ ರಾಜ್ಯ ಸಚಿವರು) :

ಅ) 39

ಆ) ಭಾರತ ಸರ್ಕಾರದಿಂದ ಇನ್ನೂ ಅನುಮತಿ ಪತ್ರ ದೊರಕಿರುವುದಿಲ್ಲ.

ರಾಜ್ಯದ ಕೈಗಾರಿಕೆ ನೀತಿ ಬಗ್ಗೆ

46 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕರ್ನಾಟಕ ರಾಜ್ಯದ ಕೈಗಾರಿಕಾ ನೀತಿ ಏನು?

ಆ) ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಯಾವ ಸ್ಥಳದಲ್ಲಿ ನಿರ್ಮಾಣವಾಗಲಿದೆ ಇದಕ್ಕಾಗಿ ಎಷ್ಟು ವಿಸ್ತೀರ್ಣದ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ?

ಇ) ಬೆಂಗಳೂರು ನಗರದ ಸುತ್ತ ಅಪಾರ ಕೈಗಾರಿಕೆಗಳು ಬರುವುದರಿಂದ ಪರಿಸರ ಹದಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಕಾರ್ಖಾನೆಗಳಲ್ಲಿ ನೂರಕ್ಕೆ ನೂರು ಮಣ್ಣಿನ ಮಕ್ಕಳ ಉದ್ಯೋಗಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು):

ಅ) ರಾಜ್ಯ ಸರ್ಕಾರದ ಹೊಸ ಕೈಗಾರಿಕಾ ನೀತಿಯು ಸರ್ಕಾರಿ ಆದೇಶ ಸಂಖ್ಯೆ : ಸಿಐ 140 ಎಸ್‌ಪಿಸಿ 93 ದಿ: 12.7.98ರ ಪ್ರಕಾರ ಇದೆ. ಸರ್ಕಾರವು ಕೈಗಾರಿಕಾ ನೀತಿಯನ್ನು ಪರಿಷ್ಕರಿಸುವ ಬಗ್ಗೆ ಪರಿಶೀಲಿಸುತ್ತಿದೆ.

ಆ) ಅಂತರರಾಷ್ಟ್ರೀಯ ಮಟ್ಟದ ವಿಮಾನ ನಿಲ್ದಾಣವು ಬೆಂಗಳೂರು ಬಳಿಯ ದೇವನಹಳ್ಳಿಯ ತಾಲ್ಲೂಕಿನ ದಕ್ಷಿಣ ಭಾಗದಲ್ಲಿ ನಿರ್ಮಾಣವಾಗಲಿದೆ ಮತ್ತು ಇದಕ್ಕಾಗಿ ಬೆಂಗಳೂರು ಉತ್ತರ ತಾಲ್ಲೂಕು ಮತ್ತು ದೇವನಹಳ್ಳಿ ತಾಲ್ಲೂಕಿನಲ್ಲಿ ಒಟ್ಟು 5324.28 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಪ್ರಾರಂಭಿಕ ಅಧಿಸೂಚನೆಯನ್ನು ಹೊರಡಿಸಲಾಗಿದೆ.